For more job news visit : www.kpscvaani.com

ಕರ್ನಾಟಕ ಸರ್ಕಾರ
ಪಂಚಾಯತ್ ರಾಜ್ ಆಯುಕ್ತಾಲಯ
ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.

ಸಂಖ್ಯೆ:ಕಪಂರಾಆ/ಅಭಿವೃದ್ಧಿ/489/2026
C.No: 2162515

ದಿನಾಂಕ: 27.05.2026

ಅಧಿಸೂಚನೆ

ವಿಷಯ: ಸಾಮಾಜಿಕ ಕಳಕಳಿಯುಳ್ಳ ಸ್ಥಳೀಯ ಆಡಳಿತಕ್ಕಾಗಿ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದಲ್ಲಿ ಸ್ಥಾಪಿಸಲಾದ **"ಸಾಮಾಜಿಕವಾಗಿ ಸ್ಪಂದಿಸುವ ಸ್ಥಳೀಯ ಆಡಳಿತ (Socially Responsive Local Governance-SRLG) ಕೋಶ"** ದಲ್ಲಿ ಒಬ್ಬರು(01) ವಿಷಯ ಪರಿಣಿತರು ಮತ್ತು ಇಬ್ಬರು (02) ಯುವ ವೃತ್ತಿಪರರ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

****

ಕರ್ನಾಟಕದಲ್ಲಿ ಗ್ರಾಮ ಪಂಚಾಯತಿಗಳು ಆರೋಗ್ಯ ರಕ್ಷಣೆ, ಘನತ್ಯಾಜ್ಯ ನಿರ್ವಹಣೆ, ಗ್ರಂಥಾಲಯ ಅಭಿವೃದ್ಧಿ ಮುಂತಾದ ಕ್ಷೇತ್ರಗಳಲ್ಲಿ ನಾಯಕತ್ವದ ಸಾಮರ್ಥ್ಯವನ್ನು ಪ್ರದರ್ಶಿಸಿವೆ. ಈ ದಿಶೆಯಲ್ಲಿ ಗ್ರಾಮ ಪಂಚಾಯತಿಗಳನ್ನು ಸಾಮಾಜಿಕ ಕಳಕಳಿಯುಳ್ಳ ಸ್ಪಂದನಾ ಶೀಲ ಹಾಗೂ ಸಮರ್ಥ ಗ್ರಾಮ ಸರ್ಕಾರಗಳನ್ನಾಗಿ ರೂಪಿಸಲು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದಲ್ಲಿ ಸ್ಥಾಪಿಸಲಾಗುವ **"ಸಾಮಾಜಿಕವಾಗಿ ಸ್ಪಂದಿಸುವ ಸ್ಥಳೀಯ ಆಡಳಿತ ಕೋಶ"**ದಲ್ಲಿ ಕಾರ್ಯನಿರ್ವಹಿಸಲು ಒಬ್ಬರು ವಿಷಯ ಪರಿಣಿತರು ಮತ್ತು ಇಬ್ಬರು ಯುವವೃತ್ತಿಪರರ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳ ಅರ್ಹತೆಗಳು: ಒಬ್ಬರು (01) ವಿಷಯ ಪರಿಣಿತರು ಮತ್ತು ಇಬ್ಬರು (02) ಯುವ ವೃತ್ತಿಪರರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ವಿದ್ಯಾರ್ಹತೆ, ಅನುಭವ ಇತರೆ ಮಾನದಂಡಗಳ ವಿವರ ಈ ಕೆಳಕಂಡಂತಿದೆ.

ಹುದ್ದೆ	ವಿದ್ಯಾರ್ಹತೆ	ಅನುಭವ
ವಿಷಯ ಪರಿಣಿತರು - ಒಬ್ಬರು (01)	ಸಮಾಜ ಶಾಸ್ತ್ರ/ಸಮಾಜ ಕಾರ್ಯ/ ಗ್ರಾಮೀಣಾಭಿವೃದ್ಧಿ/ ಸಾರ್ವಜನಿಕ ನೀತಿ ಅಥವಾ ಇತರೆ ಯಾವುದಾದರು ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು.	ಸಾಮಾಜಿಕ ಅಭಿವೃದ್ಧಿ ಕ್ಷೇತ್ರದಲ್ಲಿ ಕನಿಷ್ಟ 5ರಿಂದ 8 ವರ್ಷಗಳ ಕ್ಷೇತ್ರ ಮಟ್ಟದ ಅನುಭವ ಹೊಂದಿರಬೇಕು ಪಂಚಾಯತ್ ರಾಜ್ ಕಾಯ್ದೆ ವಿಕೇಂದ್ರೀಕೃತ ಪಂಚಾಯತ್ ರಾಜ್ ವ್ಯವಸ್ಥೆ, ಸಮುದಾಯ ಸಹಭಾಗಿತ್ವದಲ್ಲಿ ಯೋಜನೆ ಸಿದ್ಧಪಡಿಸುವುದು ಕುರಿತಂತೆ ಜ್ಞಾನ ಮತ್ತು ಅನುಭವವಿದ್ದಲ್ಲಿ ಆದ್ಯತೆ ನೀಡಲಾಗುವುದು.

For more job news visit : www.kpscvaani.com

ಯುವ ವೃತ್ತಿಪರರು-ಇಬ್ಬರು (02)	ಸಮಾಜ ಶಾಸ್ತ್ರ/ಸಮಾಜ ಕಾರ್ಯ / ಗ್ರಾಮೀಣಾಭಿವೃದ್ಧಿ/ಸಾರ್ವಜನಿಕ ನೀತಿ ವಿಷಯ ಅಥವಾ ಯಾವುದಾರೂ ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು.	ಆರೋಗ್ಯ, ಶಿಕ್ಷಣ, ಗ್ರಾಮೀಣಾಭಿವೃದ್ಧಿ, ಮಕ್ಕಳು ಮತ್ತು ಮಹಿಳೆಯರು, ವಿಶೇಷ ಚೇತನರು, ಹಿರಿಯ ನಾಗರಿಕರು ಗಳಿಗೆ ಸಂಬಂಧಿಸಿದ ಯಾವುದಾದರೂ ಎರಡು ಕ್ಷೇತ್ರಗಳಲ್ಲಿ ಕನಿಷ್ಟ ಎರಡು ವರ್ಷ ಕಾರ್ಯನಿರ್ವಹಿಸಿದ ಅನುಭವ ಹೊಂದಿರಬೇಕು.

ಇತರೆ ಅರ್ಹತೆಗಳು ಮತ್ತು ನೇಮಕಾತಿ ಷರತ್ತುಗಳು:

1. ವಿಷಯ ಪರಿಣಿತರ ಹುದ್ದೆಗೆ ಅರ್ಜಿ ಸಲ್ಲಿಸಲು ಕನಿಷ್ಠ ವಯೋಮಿತಿ 30 ವರ್ಷ ಆಗಿರತಕ್ಕದ್ದು.
2. ಯುವ ವೃತ್ತಿಪರರ ಹುದ್ದೆಗೆ ಅರ್ಜಿ ಸಲ್ಲಿಸಲು ಗರಿಷ್ಟ ವಯೋಮಿತಿ 35 ವರ್ಷ ಆಗಿರತಕ್ಕದ್ದು.
3. ಕಡ್ಡಾಯವಾಗಿ ಕನ್ನಡವನ್ನು ಮಾತನಾಡಲು, ಓದಲು ಮತ್ತು ಬರೆಯಲು ತಿಳಿದಿರಬೇಕು, ಇಂಗ್ಲೀಷ್ ಭಾಷೆಯ ಜ್ಞಾನ ಹೊಂದಿರಬೇಕು.
4. ಕಂಪ್ಯೂಟರ್ ಜ್ಞಾನ ಮತ್ತು ಕೌಶಲ್ಯ ಹೊಂದಿರಬೇಕು, ಮುಖ್ಯವಾಗಿ MS-Word, MS Excel ಮತ್ತು MS-Power Point ಗಳನ್ನು ಬಳಸಲು ತಿಳಿದಿರಬೇಕು.
5. ಪಂಚಾಯತ್ ರಾಜ್ ವ್ಯವಸ್ಥೆ ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿ ಇರಬೇಕು.
6. **"ಸಾಮಾಜಿಕವಾಗಿ ಸ್ಪಂದಿಸುವ ಸ್ಥಳೀಯ ಆಡಳಿತ ಕೋಶ"**ದ ಗುರಿಯನ್ನು ಸಾಧಿಸಲು ಗ್ರಾಮ ಪಂಚಾಯತಿಗಳು ಸೇರಿದಂತೆ ವಿವಿಧ ಭಾಗೀದಾರರೊಂದಿಗೆ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯ ಹೊಂದಿರಬೇಕು.
7. ಕ್ಷೇತ್ರಮಟ್ಟದಲ್ಲಿ ಗ್ರಾಮ ಪಂಚಾಯತಿಗಳು ಮತ್ತು ಸಮುದಾಯದೊಂದಿಗೆ ಕೆಲಸ ಮಾಡಲು ಮತ್ತು ಅಗತ್ಯವಿದ್ದಲ್ಲಿ ಯಾವುದೇ ಗ್ರಾಮ ಪಂಚಾಯತಿಗೆ ಪ್ರಯಾಣಿಸಲು ಸಿದ್ದರಿರಬೇಕು.

"ಸಾಮಾಜಿಕವಾಗಿ ಸ್ಪಂದಿಸುವ ಸ್ಥಳೀಯ ಆಡಳಿತ ಕೋಶ"ದ ಸಿಬ್ಬಂದಿಗಳ ಜವಾಬ್ದಾರಿಗಳು:

ಹುದ್ದೆ	ಜವಾಬ್ದಾರಿಗಳು
ವಿಷಯ ಪರಿಣಿತರು	1. ಆಯುಕ್ತರು,ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಇವರಿಗೆ ವರದಿ ಮಾಡಿಕೊಳ್ಳುವುದು ಹಾಗೂ ಸಾಮಾಜಿಕವಾಗಿ ಸ್ಪಂದಿಸುವ ಸ್ಥಳೀಯ ಆಡಳಿತ ಕೋಶದಲ್ಲಿ ಕಾರ್ಯನಿರ್ವಹಿಸುವುದು. 2. ಸಾಮಾಜಿಕವಾಗಿ ಸ್ಪಂದಿಸುವ ಸ್ಥಳೀಯ ಆಡಳಿತ ಪರಿಕಲ್ಪನೆ ಮತ್ತು ಗ್ರಾಮ ಪಂಚಾಯತಿಗಳಿಂದ ಅನುಷ್ಠಾನಗೊಳಿಸಬೇಕಾದ ಕಾರ್ಯಚಟುವಟಿಕೆಗಳ ಬಗ್ಗೆ ಮಾರ್ಗಸೂಚಿಯನ್ನು ಸಿದ್ಧಪಡಿಸುವುದು. 3. ಸಾಮಾಜಿಕವಾಗಿ ಸ್ಪಂದಿಸುವ ಸ್ಥಳೀಯ ಆಡಳಿತ ಕುರಿತು ಭಾಗೀದಾರರಿಗೆ ಆಯುಕ್ತಾಲಯದಿಂದ ತರಬೇತಿಗಳನ್ನು ಆಯೋಜಿಸಲು ಬೆಂಬಲಿಸುವುದು.

For more job news visit : www.kpscvaani.com

	4. ಗ್ರಾಮ ಪಂಚಾಯಿತಿಗಳಿಂದ ಮಕ್ಕಳ ಗ್ರಾಮ ಸಭೆ, ಮಹಿಳಾ ಗ್ರಾಮ ಸಭೆ, ಮಹಿಳಾ ದೌರ್ಜನ್ಯ ಮುಕ್ತ ಅಭಿಯಾನ ಸೇರಿದಂತೆ ಇತರೆ ಕಾರ್ಯಕ್ರಮ/ಚಟುವಟಿಕೆಗಳ ಬಗ್ಗೆ ಕಾಲ ಕಾಲಕ್ಕೆ ಪಂಚಾಯತ್ ರಾಜ್ ಆಯುಕ್ತಾಲಯ/ ಸರ್ಕಾರದಿಂದ ಸುತ್ತೋಲೆ, ಮಾರ್ಗಸೂಚಿ ನಿರ್ದೇಶನಗಳನ್ನು ಸಿದ್ಧಪಡಿಸುವುದು. 5. ಗ್ರಾಮ ಪಂಚಾಯಿತಿಗಳಿಂದ ಮಕ್ಕಳ ಮತ್ತು ಮಹಿಳೆಯರ ಗ್ರಾಮ ಸಭೆಗಳನ್ನು ಆಯೋಜಿಸಿದ ಬಗ್ಗೆ ವರದಿಗಳನ್ನು ಆಯುಕ್ತಾಲಯ/ಸರ್ಕಾರಕ್ಕೆ ಸಲ್ಲಿಸಲು ಸಂಯೋಜನೆ ಮಾಡುವುದು. 6. ಮಕ್ಕಳು, ಮಹಿಳೆಯರು, ವಿಶೇಷ ಚೇತನರು, ಹಿರಿಯ ನಾಗರೀಕರುಗಳ ಕೇಂದ್ರಿತ ವಿಷಯಗಳಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿಗಳಿಂದ ಸ್ಪಂದಿಸಲು ಅಗತ್ಯವಿರುವ ತರಬೇತಿಗಳನ್ನು ANSSIRD&PR ಮತ್ತು ಇತರೆ ಸರ್ಕಾರಿ/ಸರ್ಕಾರೇತರ ಸಂಸ್ಥೆಗಳಿಂದ ಆಯೋಜಿಸಲು ಬೆಂಬಲಿಸುವುದು ಮತ್ತು ಸಂಯೋಜನೆ ಮಾಡುವುದು. 7. ಗ್ರಾಮ ಪಂಚಾಯತಿಗಳಿಂದ ಮಕ್ಕಳು, ಮಹಿಳೆಯರು ವಿಶೇಷ ಚೇತನರ ಆಯವ್ಯಯವನ್ನು ಸಿದ್ಧಪಡಿಸಲು ಸಂಬಂಧಿಸಿದಂತೆ ನಮೂನೆಗಳು ಮತ್ತು ತರಬೇತಿ ಮಾಡ್ಯೂಲ್ ಗಳನ್ನು ಸಿದ್ಧಪಡಿಸುವುದು, ತರಬೇತಿಗಳನ್ನು ಆಯೋಜಿಸುವುದು ಹಾಗೂ ಸಿದ್ಧಪಡಿಸಿದ ಆಯವ್ಯಯದ ಅನ್ವಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಗ್ರಾಮ ಪಂಚಾಯತಿಗಳಿಗೆ ಬೆಂಬಲಿಸುವುದು. 8. ಅರಿವು ಕೇಂದ್ರ, ಕೂಸಿನ ಮನೆ, ಘನ ತ್ಯಾಜ್ಯ ನಿರ್ವಹಣೆ, ಗ್ರಾಮ ಆರೋಗ್ಯ ಯೋಜನೆಗಳ ಅನುಷ್ಠಾನದ ಉಸ್ತುವಾರಿ ಮತ್ತು ಮಾಹಿತಿ ನಿರ್ವಹಣೆ ಕಾರ್ಯನಿರ್ವಹಿಸುವುದು. 9. ಗ್ರಾಮ ಪಂಚಾಯತಿಗಳನ್ನು ಸಾಮಾಜಿಕವಾಗಿ ಸ್ಪಂದಿಸುವ ಸ್ಥಳೀಯ ಆಡಳಿತವನ್ನಾಗಿಸಲು ಸಮುದಾಯ ಪಾಲ್ಗೊಳ್ಳುವಿಕೆಗಾಗಿ ಸ್ವಯಂ ಸೇವಾ ಸಂಸ್ಥೆಗಳನ್ನು ತೊಡಗಿಸಿಕೊಳ್ಳಲು ಬೆಂಬಲಿಸುವುದು. 10. ಆಯುಕ್ತಾಲಯದಿಂದ ಪ್ರಗತಿ ಪರಿಶೀಲನಾ ಸಭೆ ಮತ್ತು ಇತರೆ ಸಭೆಗಳನ್ನು ಆಯೋಜಿಸಲು ಬೆಂಬಲಿಸುವುದು. 11. ಯುವ ವೃತ್ತಿಪರರಿಗೆ ಅವರ ಜವಾಬ್ದಾರಿಗಳನ್ನು ನಿರ್ವಹಿಸಲು ಸೂಕ್ತ ಮಾರ್ಗದರ್ಶನ, ಸಲಹೆ, ಸಹಕಾರ ನೀಡುವುದು ಹಾಗೂ ಅವರ ಕಾರ್ಯನಿರ್ವಹಣೆಯ ಉಸ್ತುವಾರಿ ವಹಿಸುವುದು. 12. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಆಯುಕ್ತರು, ನಿರ್ದೇಶಕರು(ಅಭಿವೃದ್ಧಿ) ಇವರು ವಹಿಸುವ ಕೆಲಸ ಕಾರ್ಯಗಳನ್ನು ನಿರ್ವಹಿಸುವುದು.
ಯುವ ವೃತ್ತಿಪರರು	1. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಆಯುಕ್ತರಿಗೆ ವರದಿ ಮಾಡಿಕೊಳ್ಳುವುದು ಹಾಗೂ ಕೋಶದ ಕಾರ್ಯನಿರ್ವಹಣೆಗೆ ಪೂರ್ಣ ಬೆಂಬಲ ನೀಡುವುದು. 2. ಮಕ್ಕಳ ಗ್ರಾಮ ಸಭೆ ಮತ್ತು ಮಹಿಳೆಯರ ಗ್ರಾಮ ಸಭೆ, ಮಹಿಳಾ ದೌರ್ಜನ್ಯ ಮುಕ್ತ ಅಭಿಯಾನವನ್ನು ಗ್ರಾಮ ಪಂಚಾಯತಿಗಳಿಂದ ನಡೆಸಲು ಸಂಬಂಧಿಸಿದಂತೆ ಸುತ್ತೋಲೆ, ಮಾರ್ಗಸೂಚಿ, ನಿರ್ದೇಶನಗಳು ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮೂಲಕ ಗ್ರಾಮ ಪಂಚಾಯತಿಗಳಿಗೆ ತಲುಪಿರುವುದನ್ನು ಮತ್ತು ಅನುಷ್ಠಾನಗೊಳಿಸುವುದನ್ನು ಖಾತರಿಪಡಿಸುವುದು.

For more job news visit : www.kpscvaani.com

3. ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳೊಂದಿಗೆ ಅನುಸರಣೆ ಮಾಡಿ ಮಕ್ಕಳ ಗ್ರಾಮ ಸಭೆ ಮತ್ತು ಮಹಿಳೆಯರ ಗ್ರಾಮ ಸಬೆಯ ವರದಿಗಳನ್ನು ಹಾಗೂ ಇತರೆ ಅವಶ್ಯಕ ವರದಿಗಳನ್ನು ಗ್ರಾಮ ಪಂಚಾಯತಿಗಳಿಂದ P-2 ನಲ್ಲಿ ಇಂದೀಕರಿಸಿರುವುದನ್ನು ಖಾತರಿಪಡಿಸಿಕೊಳ್ಳುವುದು.
4. ಅರಿವು ಕೇಂದ್ರ, ಕೂಸಿನ ಮನೆ, ಘನ ತ್ಯಾಜ್ಯ ನಿರ್ವಹಣೆ, ಗ್ರಾಮ ಆರೋಗ್ಯ ಅನುಷ್ಠಾನದ ಪ್ರಗತಿ ವರದಿಗಳನ್ನು ಗ್ರಾಮ ಪಂಚಾಯತಿಗಳಿಂದ P-2 ನಲ್ಲಿ ಇಂದೀಕರಿಸಿರುವುದನ್ನು ಖಾತರಿಪಡಿಸಿಕೊಳ್ಳುವುದು.
5. ಗ್ರಾಮ ಪಂಚಾಯತಿಗಳಿಂದ ಮಕ್ಕಳು, ಮಹಿಳೆಯರು ಮತ್ತು ವಿಶೇಷ ಚೇತನರ ಆಯವ್ಯಯವನ್ನು ಸಿದ್ಧಪಡಿಸಲು ಸಂಬಂಧಿಸಿದಂತೆ ನಮೂನೆಗಳು ಮತ್ತು ತರಬೇತಿ ಮಾಡ್ಯೂಲ್ ಗಳನ್ನು ಸಿದ್ಧಪಡಿಸಲು ಹಾಗೂ ತರಬೇತಿಗಳನ್ನು ಆಯೋಜಿಸಲು ಬೆಂಬಲಿಸುವುದು.
6. ಗ್ರಾಮ ಪಂಚಾಯತಿಗಳಿಂದ ಮಕ್ಕಳು, ಮಹಿಳೆಯರು ಮತ್ತು ವಿಶೇಷ ಚೇತನರಿಗಾಗಿ ಸಿದ್ಧಪಡಿಸಿದ ಆಯವ್ಯಯವನ್ನು ಅನುಷ್ಠಾನಗೊಳಿಸಲು ಗ್ರಾಮ ಪಂಚಾಯತಿಗಳಿಗೆ ಬೆಂಬಲಿಸುವುದು.
7. ಕಾಲ ಕಾಲಕ್ಕೆ ಗ್ರಾಮ ಪಂಚಾಯತಿಗಳಿಂದ ನಡೆಸಲಾಗುವ ಕಾರ್ಯಕ್ರಮಗಳ ಪ್ರಗತಿಯ ವರದಿಗಳನ್ನು ಆಯಾ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳಿಂದ ಸಂಗ್ರಹಿಸಿ ಕ್ರೋಡೀಕರಿಸಿ ಆಯುಕ್ತರು ಮತ್ತು ನಿರ್ದೇಶಕರು(ಅಭಿವೃದ್ಧಿ) ಇವರಿಗೆ ಸಲ್ಲಿಸುವುದು.
8. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಆಯುಕ್ತರು, ನಿರ್ದೇಶಕರು(ಅಭಿವೃದ್ಧಿ), ವಿಷಯ ಪರಿಣಿತರು ಕಾಲ ಕಾಲಕ್ಕೆ ವಹಿಸುವ ಇತರೆ ಕೆಲಸ ಕಾರ್ಯಗಳನ್ನು ನಿರ್ವಹಿಸುವುದು.

ಆಯ್ಕೆ ವಿಧಾನ, ಅವಧಿ ಮತ್ತು ಮಾಸಿಕ ಸಂಭಾವನೆ:

1. ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳ ವಿದ್ಯಾರ್ಹತೆ, ಅನುಭವ ಮತ್ತು ಕೌಶಲ್ಯವನ್ನು ಆಧರಿಸಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ಮತ್ತು ಮೌಖಿಕ ಸಂದರ್ಶನದ ಮೂಲಕ ನೇಮಕಾತಿ ಮಾಡಲಾಗುವುದು (ಅರ್ಜಿಯೊಂದಿಗೆ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಅಂಕಪಟ್ಟಿಗಳು, ಅನುಭವಕ್ಕೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳು, ವಯೋಮಿತಿ ದೃಢೀಕರಿಸಲು SSLC ಅಂಕಪಟ್ಟಿ/ಸರ್ಕಾರದಿಂದ ಅನುಮೋದಿತ ಇತರೆ ಗುರುತಿನ ಚೀಟಿ, ಇತರೆ ಯಾವುದಾದರೂ ಸಾಧನೆಗಳಿದ್ದಲ್ಲಿ ಮಾಹಿತಿಯನ್ನು ಲಗತ್ತಿಸುವುದು)
2. ಆಯ್ಕೆಯಾದ ಅಭ್ಯರ್ಥಿಗಳನ್ನು ಈ ಹಣಕಾಸು ವರ್ಷದ ಅವಧಿಗೆ ನೇಮಕ ಮಾಡಿಕೊಳ್ಳಲಾಗುವುದು. (31.03.2027 ರವರಗೆ)
3. ಅಭ್ಯರ್ಥಿಗಳ ಕಾರ್ಯಕ್ಷಮತೆ ಮತ್ತು ಸರ್ಕಾರದಿಂದ ಅನುದಾನದ ಲಭ್ಯತೆಯ ಮೇಲೆ ಮುಂದುವರಿಸಲಾಗುವುದು.

ಕ್ರ.ಸಂ	ಹುದ್ದೆ	ಮಾಸಿಕ ಸಂಭಾವನೆ
1	ವಿಷಯ ಪರಿಣಿತರು	₹ 1,00,000/- (ಒಂದು ಲಕ್ಷ)
2	ಯುವ ವೃತ್ತಿಪರರು	₹ 75,000/- (ಎಪ್ಪತ್ತೈದು ಸಾವಿರ)

For more job news visit : www.kpscvaani.com

ಅಭ್ಯರ್ಥಿಗಳು ನಿಗದಿಪಡಿಸಲಾದ ಅರ್ಹತೆಗಳು ಮತ್ತು ಅನುಭವಗಳಿಗೆ ಅನುಗುಣವಾಗಿ ಸ್ವ-ವಿವರಗಳನ್ನು ಒಳಗೊಂಡ ಅರ್ಜಿಯನ್ನು ಮುಚ್ಚಿದ ಲಕೋಟೆಯಲ್ಲಿ ಖುದ್ದಾಗಿ ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ರಸ್ತೆ, ಗಾಂಧಿನಗರ, ಬೆಂಗಳೂರು ಇವರಿಗೆ ವಿಳಾಸಿಸಿ ಸಲ್ಲಿಸುವುದು ಅಥವಾ srlgrecruitment@gmail.com ಗೆ ಇ ಮೇಲ್ ಮೂಲಕ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವಿಕೆಯು ದಿನಾಂಕ: 30.05.2026 ರಿಂದ ಪ್ರಾರಂಭವಾಗಿ ದಿನಾಂಕ: 06.06.2026 ರ ಕಛೇರಿ ಅವಧಿ ಸಂಜೆ: 5.30 ಕ್ಕೆ ಕೊನೆಗೊಳ್ಳಲಿದೆ. ಅಂತಿಮ ದಿನಾಂಕದ ನಂತರ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

(ಆಯುಕ್ತರಿಂದ ಅನುಮೋದಿತ)

ದಿನಾಂಕ: 27.05.2026
ಸ್ಥಳ: ಬೆಂಗಳೂರು

ನಿರ್ದೇಶಕರು (ಅಭಿವೃದ್ಧಿ)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ